RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ



| | | |
|---|---|---|
| ಭಾಗ-I<br>Part-I | ಬೆಂಗಳೂರು, ಬುಧವಾರ, ಜೂನ್ ೨೨, ೨೦೧೬ (ಆಷಾಢ ೧, ಶಕ ವರ್ಷ ೧೯೩೮)<br>Bengaluru, Wednesday, June 22, 2016 (Ashada 1, Shaka Varsha 1938) | ನಂ. ೮೬೦<br>No. 860 |



ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಸರ್ಕಾರದ ಸಚಿವಾಲಯ ಹಾಗೂ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ **ಜಾಗೃತ ಕೋಶ** (Vigilance Cells)ಗಳನ್ನು ಚಾಲನೆಗೊಳಿಸುವ ಕುರಿತಂತೆ ಮಾರ್ಗಸೂಚಿಗಳನ್ನು ಹೊರಡಿಸುವ ಬಗ್ಗೆ.

ಓದಲಾಗಿದೆ:-

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 14 ಸೇಲೋಯು 2016, ದಿನಾಂಕ: 14.03.2016.

ಪ್ರಸ್ತಾವನೆ:-

ಮೇಲೆ ಓದಲಾದ ದಿನಾಂಕ:14.03.2016ರ ಆದೇಶದನ್ವಯ, ರಾಜ್ಯದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ, 1988ನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಹಾಗೂ ಸ್ವತಂತ್ರವಾಗಿ ತನಿಖೆ ನಡೆಸಲು ಒಂದು ಪ್ರತ್ಯೇಕ ಭ್ರಷ್ಟಾಚಾರ ನಿಗ್ರಹ ದಳವನ್ನು (Anti Corruption Bureau) ಸೃಜಿಸಲಾಗಿದೆ.

ಸದರಿ ಆದೇಶದಲ್ಲಿನ ಆದೇಶ ಭಾಗದ ಕಂಡಿಕೆ 7ರ ಉದ್ಧೃತ ಭಾಗ ಈ ಕೆಳಕಂಡಂತಿದೆ:-

> "7. ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಗಳನ್ನೊಳಗೊಂಡಂತೆ ನಿರ್ದೇಶನಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳು ತಮ್ಮ ಇಲಾಖೆ/ಸಂಸ್ಥೆಗಳಲ್ಲಿ ಒಂದು **ಜಾಗೃತ ಕೋಶ**ವನ್ನು ಸೃಜಿಸುವಂತೆ ಆದೇಶಿಸಲಾಗಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಜಾಗೃತ ವಿಭಾಗವು ಈ ಜಾಗೃತ ಕೋಶಗಳ ಕಾರ್ಯನಿರ್ವಹಣೆಯ ಮೇಲ್ವಿಚಾರಣೆಯನ್ನು ಮಾಡುವುದು ಮತ್ತು ಮುಖ್ಯಮಂತ್ರಿಯವರ ಅನುಮೋದನೆಯೊಂದಿಗೆ ಪ್ರತ್ಯೇಕವಾಗಿ ಹೊರಡಿಸಲಾಗುವ ವಿವರವಾದ ಸೂಚನೆಗಳಡಿಯಲ್ಲಿ ಜಾಗೃತ ಕಾರ್ಯವನ್ನು ಕೈಗೊಳ್ಳುವುದು."

ದಿನಾಂಕ:14.03.2016ರ ಆದೇಶದನ್ವಯ, ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ

ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳು ತಮ್ಮ ಇಲಾಖೆ/ಸಂಸ್ಥೆಗಳಲ್ಲಿ ಜಾಗೃತ ಕೋಶಗಳನ್ನು ಸೃಜಿಸಬೇಕಾಗಿದ್ದು, ತತ್ಸಂಬಂಧ ಕಾರ್ಯವಿಧಾನ/ ಮಾರ್ಗಸೂಚಿಗಳನ್ನು ಹೊರಡಿಸಲು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 88 ಸೇಲೋಯು 2016, ಬೆಂಗಳೂರು, ದಿನಾಂಕ: 22.06.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 14 ಸೇಲೋಯು 2016, ದಿನಾಂಕ:14.03.2016ರ ಆದೇಶ ಭಾಗದ ಕಂಡಿಕೆ 7ರನ್ವಯ ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳಲ್ಲಿ ಜಾಗೃತ ಕೋಶಗಳನ್ನು ಚಾಲನೆಗೊಳಿಸುವ ನಿಟ್ಟಿನಲ್ಲಿ, ಕೆಳಕಂಡ ಕಾರ್ಯವಿಧಾನ/ಮಾರ್ಗಸೂಚಿಗಳನ್ನು ನೀಡಲಾಗಿದೆ:-

1. ಕರ್ನಾಟಕ ಸರ್ಕಾರದ ಸಚಿವಾಲಯದ ಎಲ್ಲಾ ಇಲಾಖೆಗಳಲ್ಲಿ ಒಂದು **ಜಾಗೃತ ಕೋಶ** ಇರತಕ್ಕದ್ದು. ಈ ಜಾಗೃತ ಕೋಶಕ್ಕೆ **ಮುಖ್ಯ ಜಾಗೃತ ಅಧಿಕಾರಿ** (Chief Vigilance Officer)ಯು ಮುಖ್ಯಸ್ಥರಾಗಿರುತ್ತಾರೆ. ಹಾಗು ಆಯಾ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳ ನಂತರದ ಅಧಿಕಾರಿಯನ್ನು (officer next in seniority) **ಮುಖ್ಯ ಜಾಗೃತ ಅಧಿಕಾರಿ** (Chief Vigilance Officer)ಯನ್ನಾಗಿ ನೇಮಿಸತಕ್ಕದ್ದು.
2. ಸರ್ಕಾರದ ಪ್ರತಿಯೊಂದು ಕ್ಷೇತ್ರ ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳ ಕೇಂದ್ರಸ್ಥಾನದ ಕಚೇರಿಗಳಲ್ಲಿ ಒಂದು **ಜಾಗೃತ ಕೋಶ** ಇರತಕ್ಕದ್ದು. ಈ ಜಾಗೃತ ಕೋಶಕ್ಕೆ **ಮುಖ್ಯ ಜಾಗೃತ ಅಧಿಕಾರಿ** (Chief Vigilance Officer)ಯು ಮುಖ್ಯಸ್ಥರಾಗಿರುತ್ತಾರೆ. ಹಾಗೂ ಆಯಾ ಇಲಾಖಾ/ಸಂಸ್ಥೆಯ ಮುಖ್ಯಸ್ಥರ ನಂತರದ ಅಧಿಕಾರಿಯನ್ನು (officer next in seniority) **ಮುಖ್ಯ ಜಾಗೃತ ಅಧಿಕಾರಿ** (Chief Vigilance Officer)ಯನ್ನಾಗಿ ನೇಮಿಸತಕ್ಕದ್ದು.
3. ಸರ್ಕಾರದ ಪ್ರತಿಯೊಂದು ಕ್ಷೇತ್ರ ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳು ವಿಭಾಗ ಮತ್ತು ಜಿಲ್ಲಾ ಮಟ್ಟದಲ್ಲಿ ಕಚೇರಿಗಳನ್ನು ಹೊಂದಿದ್ದು, ಸದರಿ ಕಚೇರಿಗಳಲ್ಲಿ ಗಣನೀಯ ಸಿಬ್ಬಂದಿ (reasonable strength) ಇದ್ದಲ್ಲಿ, ಆ ವಿಭಾಗ/ಜಿಲ್ಲಾ ಮಟ್ಟದ ಕಚೇರಿಗಳಲ್ಲಿ ಒಂದು **ಜಾಗೃತ ಕೋಶ** ಇರತಕ್ಕದ್ದು. ಈ ಜಾಗೃತ ಕೋಶಕ್ಕೆ **ಜಾಗೃತ ಅಧಿಕಾರಿ** (Vigilance Officer)ಯು ಮುಖ್ಯಸ್ಥರಾಗಿರುತ್ತಾರೆ. ಸದರಿ ವಿಭಾಗ/ಜಿಲ್ಲಾ ಮಟ್ಟದ ಕಚೇರಿಯ ಮುಖ್ಯಸ್ಥರ ನಂತರದ ಅಧಿಕಾರಿಯನ್ನು (officer next in seniority) **ಜಾಗೃತ ಅಧಿಕಾರಿ** (Vigilance Officer)ಯನ್ನಾಗಿ ನೇಮಿಸತಕ್ಕದ್ದು.
4. ವಿಭಾಗ/ಜಿಲ್ಲಾ ಮಟ್ಟದ ಕಚೇರಿಗಳ ಜಾಗೃತ ಅಧಿಕಾರಿಗಳು ಆಯಾ ಇಲಾಖೆ/ಸಂಸ್ಥೆಗಳ ಕೇಂದ್ರ ಕಚೇರಿಯ ಮುಖ್ಯ ಜಾಗೃತ ಅಧಿಕಾರಿಗಳಿಗೆ ವರದಿ ಮಾಡತಕ್ಕದ್ದು.

5. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಆಯಾ ಜಿಲ್ಲೆಗಳ ಎಲ್ಲಾ ಇಲಾಖೆಗಳ ಸಂಬಂಧಪಟ್ಟ ಮುಖ್ಯ ಜಾಗೃತ ಅಧಿಕಾರಿಯ (Chief Vigilance Officer) ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ.

6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು ತಮ್ಮ ಇಲಾಖೆಗಳ ಮುಖ್ಯ ಜಾಗೃತ ಅಧಿಕಾರಿ/ಅವರ ತತ್ಸಮಾನ ಅಧಿಕಾರಿಗಳಿಗೆ ಮುಖ್ಯ ಜಾಗೃತ ಅಧಿಕಾರಿಯಾಗಿರುತ್ತಾರೆ. ಅದೇ ರೀತಿ, ಕ್ಷೇತ್ರ ಇಲಾಖೆ ಹಾಗು ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಿಗೆ ಸಂಬಂಧಿಸಿದಂತೆ, ಸಂಬಂಧಪಟ್ಟ ಇಲಾಖಾ/ಸಂಸ್ಥೆಗಳ ಮುಖ್ಯಸ್ಥರು ತಮ್ಮ ಇಲಾಖೆ/ಸಂಸ್ಥೆಗಳ ಮುಖ್ಯ ಜಾಗೃತ ಅಧಿಕಾರಿ/ಅವರ ತತ್ಸಮಾನ ಅಧಿಕಾರಿಗಳಿಗೆ ಮುಖ್ಯ ಜಾಗೃತ ಅಧಿಕಾರಿಯಾಗಿರುತ್ತಾರೆ.

7. ರಾಜ್ಯ ಆಡಳಿತಶಾಹಿಯ ಮುಖ್ಯಸ್ಥರಾಗಿರುವ ಸರ್ಕಾರದ ಮುಖ್ಯ ಕಾರ್ಯದರ್ಶಿಯವರು ರಾಜ್ಯದ **ಮುಖ್ಯ ಜಾಗೃತ ಆಯುಕ್ತರು** (Chief Vigilance Commissioner) ಆಗಿರುತ್ತಾರೆ.

2. ಮುಖ್ಯ ಜಾಗೃತ ಅಧಿಕಾರಿ ಮತ್ತು ಜಾಗೃತ ಅಧಿಕಾರಿಗಳ ಕರ್ತವ್ಯಪಟ್ಟಿಯನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶದ ಮೇರೆಗೆ ಮತ್ತು ಅವರ ಹೆಸರಿನಲ್ಲಿ

**ಉಮಾ. ಕೆ.**
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು-2).

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) 500 ಪ್ರತಿಗಳು